# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2160
2. ಸದಸ್ಯರ ಹೆಸರು : ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 26.03.2026
4. ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಪೊಲೀಸ್ ಇಲಾಖೆಯಲ್ಲಿ ಬರುವ ಎಲ್ಲಾ ವಿಭಾಗಗಳಲ್ಲಿನ ಮುಖ್ಯ ಪೇದೆಗಳು ಮತ್ತು ಅದಕ್ಕೂ ಮೇಲ್ಪಟ್ಟ ಸಿಬ್ಬಂದಿ/ಅಧಿಕಾರಿಗಳ ಅಂತರ್ ಜಿಲ್ಲಾ ವರ್ಗಾವಣೆಯ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; | ಪೊಲೀಸ್ ಇಲಾಖೆಯ ಡಿ.ಎ.ಆರ್/ಸಿ.ಎ.ಆರ್/ಸಿವಿಲ್ ವಿಭಾಗದ ಪಿಎಸ್ಐ ವೃಂದದಿಂದ ವೃಂದದ ಪಿಸಿ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಅಂತರ್ ವಲಯ/ಜಿಲ್ಲಾ ವರ್ಗಾವಣೆಗೆ ಅವಕಾಶ ಕಲ್ಪಿಸುವ ಸಲುವಾಗಿ ಸರ್ಕಾರವು ಪ್ರತ್ಯೇಕವಾಗಿ ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆ (ವರ್ಗಾವಣೆ) (ವಿಶೇಷ) ನಿಯಮಗಳು 2022ನ್ನು ರಚಿಸಲಾಗಿದ್ದು, ಸದರಿ ನಿಯಮವು ದಿನಾಂಕ:22.02.2023 ರಿಂದ ಜಾರಿಗೆ ಬಂದಿರುತ್ತದೆ. ಅಲ್ಲದೆ ಸದರಿ ನಿಯಮಗಳ ಜಾರಿಗಾಗಿ ಸರ್ಕಾರದಿಂದ ಆದೇಶ ಸಂಖ್ಯೆ:ಒಇ 93 ಪಿಪಿಎಸ್ 2022, ದಿನಾಂಕ:15.07.2024 ರಂದು ಮಾರ್ಗಸೂಚಿಯನ್ನು ಹೊರಡಿಸಲಾಗಿರುತ್ತದೆ. ಈ ಮಾರ್ಗಸೂಚಿಗಳನ್ವಯ ಅಂತರ್ ಜಿಲ್ಲಾ ವರ್ಗಾವಣೆಗೆ ಅರ್ಹರಿರುವ ಮತ್ತು ಅಂತರ್ ಜಿಲ್ಲಾ ವರ್ಗಾವಣೆ ಬಯಸುವ ಅಧಿಕಾರಿ/ಸಿಬ್ಬಂದಿಗಳನ್ನು ಅಂತರ್ ಜಿಲ್ಲಾ ವರ್ಗಾವಣೆಗೆ ಪರಿಗಣಿಸುವ ಪ್ರಕ್ರಿಯೆ ಚಾಲ್ತಿಯಲ್ಲಿದೆ. |
| ಆ | ಇನ್ನಿತರ ಇಲಾಖೆಗಳಲ್ಲಿ ಅಧಿಕಾರಿಗಳು/ ಸಿಬ್ಬಂದಿಗಳಿಗೆ ನೀಡಲು ಸಾಮಾನ್ಯ ವರ್ಗಾವಣೆಯನ್ನು ಪೊಲೀಸ್ ಇಲಾಖೆಯ ಎಲ್ಲಾ ವಿಭಾಗಗಳ ಸಿಬ್ಬಂದಿ/ಅಧಿಕಾರಿಗಳಿಗೆ ನೀಡದಿರಲು ಕಾರಣಗಳೇನು ; | ಕರ್ನಾಟಕ ನಾಗರೀಕ ಸೇವಾ ನಿಯಮಗಳು 1977ರ ನಿಯಮ 16(a) ಗೆ ತಿದ್ದುಪಡಿ ಮಾಡಿ ಇಲಾಖಾ ಮುಖ್ಯಸ್ಥರಿಗೆ ಪತಿ-ಪತ್ನಿ ಪ್ರಕರಣಗಳಲ್ಲಿ 7 ವರ್ಷ ಪೂರೈಸಿದ್ದಲ್ಲಿ ಮಾತ್ರ ಅಂತರ್ ಜಿಲ್ಲಾ ವರ್ಗಾವಣೆಗೆ ಅವಕಾಶ ಕಲ್ಪಿಸಿರುತ್ತದೆ.<br><br>ಆದರೆ ಪೊಲೀಸ್ ಇಲಾಖೆಯಲ್ಲಿ ಗುಪ್ತ ಮಾಹಿತಿ ಸಂಗ್ರಹಣೆ, ಕಾನೂನು ಮತ್ತು ಸುವ್ಯವಸ್ಥೆ ನಿರ್ವಹಣೆ, ಅಪರಾಧ ಹಾಗೂ ಸಂಚಾರ ನಿಯಂತ್ರಣ ನಿರ್ವಹಣೆ ಹಾಗೂ ಕೋಮು ಸೂಕ್ಷ್ಮ ಪ್ರದೇಶಗಳಲ್ಲಿ ನಿರಂತರ ಜಾಗೃತಿ ವಹಿಸಬೇಕಾಗಿರುವುದರಿಂದ ಇಲಾಖೆಯ ಸಿಬ್ಬಂದಿಗಳಿಗೆ ವರ್ಗಾವಣೆ ಅವಕಾಶವನ್ನು ಹೆಚ್ಚಿಸುವುದಕ್ಕಾಗಿಯೇ ಪ್ರತ್ಯೇಕ ವರ್ಗಾವಣಾ ಮಾರ್ಗಸೂಚಿಯನ್ನು ರಚಿಸಿರುವುದಾಗಿರುತ್ತದೆ ಹಾಗೂ ಸದರಿ ನಿಯಮಗಳಲ್ಲಿ ಪತಿ-ಪತ್ನಿ ಪ್ರಕರಣ ಸೇರಿದಂತೆ, ಸಾಮಾನ್ಯ ಹಾಗೂ ಮಾಜಿ ಸೈನಿಕ ಸಿಬ್ಬಂದಿಗಳಿಗೂ ಸಹ ಅವಕಾಶ ಕಲ್ಪಿಸಿರುತ್ತದೆ. ಇದರಿಂದಾಗಿ |

| | | |
|---|---|---|
| | | ಪೊಲೀಸ್ ಸಿಬ್ಬಂದಿಗಳಿಗೆ ಸಾಮಾನ್ಯ ವರ್ಗಾವಣಾ ಮಾರ್ಗಸೂಚಿಯಲ್ಲಿ ನಿಗದಿಪಡಿಸಿರುವುದರಿಂದ ಹೆಚ್ಚಿನ ಸಿಬ್ಬಂದಿಗಳಿಗೆ ವರ್ಗಾವಣೆಗೆ ಅವಕಾಶ ಲಭ್ಯವಾಗುವುದರಿಂದ ಪೊಲೀಸ್ ಇಲಾಖೆಗೆ ಹೊರಡಿಸಿರುವ ವಿಶೇಷ ವರ್ಗಾವಣಾ ನಿಯಮಗಳು ಮತ್ತು ಇದಕ್ಕೆ ಸಂಬಂಧಿಸಿದಂತೆ ಹೊರಡಿಸಿರುವ ಆದೇಶದ ಆಧಾರದ ಮೇಲೆ ಇಲಾಖೆಯ ಎಲ್ಲಾ ವಿಭಾಗಗಳ (ನಿಯೋಜನೆಗೆ ಒಳಪಡುವ ವಿಶೇಷ ಘಟಕಗಳನ್ನು ಹೊರತುಪಡಿಸಿ) ಸಿಬ್ಬಂದಿಗಳನ್ನು ಅಂತರ ಜಿಲ್ಲಾ ವರ್ಗಾವಣೆಗೆ ಪರಿಗಣಿಸಲಾಗುತ್ತದೆ. |
| ಇ | ಹಲವು ವರ್ಷಗಳಿಂದ ಒಂದೇ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೊಲೀಸ್ ಇಲಾಖೆಯ (ಸಿವಿಲ್, ಸಿ.ಎ.ಆರ್. ಡಿ.ಎ.ಆರ್) ಸಿಬ್ಬಂದಿ /ಅಧಿಕಾರಿಗಳು ತಮ್ಮ ಸ್ವ-ಇಚ್ಛೆಯ ಜಿಲ್ಲೆಗಳಿಗೆ ವರ್ಗಾವಣೆ ಬಯಸುತ್ತಿದ್ದು, ಈ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು? | ಸರ್ಕಾರದ ಆದೇಶ ಸಂಖ್ಯೆ:ಒಇ 93 ಪಿಪಿಎಸ್ 2022, ದಿನಾಂಕ:15.07.2024ರ ಮಾರ್ಗಸೂಚಿಯಲ್ಲಿನ ಷರತ್ತು ಮತ್ತು ನಿಬಂಧನೆಗಳನ್ನು ಪೂರೈಸಿದ್ದಲ್ಲಿ ಅಂತರ್ ಜಿಲ್ಲಾ ವರ್ಗಾವಣೆಗೆ ಪರಿಗಣಿಸಲಾಗುತ್ತದೆ **(ಅನುಬಂಧ - ಅ)**. |

ಸಂಖ್ಯೆ: ಒಇ 90 ಪಿಇಐ 2026

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು